# ಮೈಸೂರು ವಿಶ್ವವಿದ್ಯಾನಿಲಯ

ಸ್ಥಾಪನೆ-1916

ವಿಶ್ವವಿದ್ಯಾನಿಲಯಕಾರ್ಯಸೌಧ
ಕ್ರಾಫರ್ಡ್ ಭವನ, ಮೈಸೂರು-570005.

ಸಂಖ್ಯೆ: ಎಸಿ3/756/2019-20

ದಿನಾಂಕ: 24-07-2020

## ಸುತ್ತೋಲೆ

ವಿಷಯ: ಮೈಸೂರು ವಿಶ್ವವಿದ್ಯಾನಿಲಯದ ಸ್ನಾತಕ ಪದವಿ ಕೋರ್ಸ್‌ಗಳಿಗೆ ಪ್ರವೇಶ ಪಡೆಯುವ ವಿದ್ಯಾರ್ಥಿಗಳಿಗೆ ಕರ್ನಾಟಕ ಸರ್ಕಾರದ ಪಿ.ಯು. ಬೋರ್ಡ್ ಹೊರತು ಪಡಿಸಿ ಇತರೆ ಬೋರ್ಡ್‌ಗಳ ವಿದ್ಯಾರ್ಥಿಗಳ ಅರ್ಹತಾ ಪ್ರಮಾಣ ಪತ್ರದ ಬಗ್ಗೆ.

*****

ಕರ್ನಾಟಕ ಸಕಾರದ ಪಿ.ಯು.ಬೋರ್ಡ್ ಹೊರತುಪಡಿಸಿ, **Council of Board of School Education in India (COBSE)** ಇಲ್ಲಿಂದ ಮಾನ್ಯತೆ ಪಡೆದ ಇತರೆ ಬೋರ್ಡ್‌ಗಳಲ್ಲಿ (10+2) ತೇರ್ಗಡೆ ಹೊಂದಿದ .ವಿದ್ಯಾರ್ಥಿಗಳಿಗೆ ವಿಶ್ವವಿದ್ಯಾನಿಲಯದಿಂದ ಅರ್ಹತಾ ಪ್ರಮಾಣ ಪತ್ರ ಪಡೆದ ನಂತರವೇ ಸ್ನಾತಕ ಕೋರ್ಸ್‌ಗಳಿಗೆ ಪ್ರವೇಶಾತಿ ನೀಡಬೇಕಾಗಿತ್ತು. ಆದರೆ, **COVID-19** ಸಾಂಕ್ರಮಿಕ ರೋಗದ ನಿಮಿತ್ತ ವಿದ್ಯಾರ್ಥಿಗಳು ವಿಶ್ವವಿದ್ಯಾನಿಲಯಕ್ಕೆ ಬಂದು ಹೋಗಲು ಅನಾನುಕೂಲವಾಗುವುದರಿಂದ ಇದೊಂದು ವಿಚಿತ್ರ ವಿಲಕ್ಷಣ ಸನ್ನಿವೇಶವೆಂದು ಭಾವಿಸಿ, **2020-21ನೇ** ಶೈಕ್ಷಣಿಕ ವರ್ಷಕ್ಕೆ ಮಾತ್ರ ಅನ್ವಯವಾಗುವಂತೆ ಆಯಾ ಕಾಲೇಜಿನಲ್ಲಿಯೇ ಕರ್ನಾಟಕ ಸರ್ಕಾರದ **ಪಿ.ಯು.ಬೋರ್ಡ್ ಹೊರತುಪಡಿಸಿ, (COBSE)**ಯಿಂದ ಮಾನ್ಯತೆ ಪಡೆದ ಇತರೆ **ಬೋರ್ಡ್‌ಗಳಲ್ಲಿ (10+2) ತೇರ್ಗಡೆ ಹೊಂದಿದ** ವಿದ್ಯಾರ್ಥಿಗಳ ಅಂಕಪಟ್ಟಿಗಳನ್ನು ಪರಿಶೀಲಿಸಿ, **(COBSE ಯಿಂದ** ಮಾನ್ಯತೆ ಪಡೆದ **Board** ಗಳ ವಿವರಗಳನ್ನು ವಿಶ್ವವಿದ್ಯಾನಿಲಯದ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗಿದೆ) **ಅರ್ಹತಾ ಪ್ರಮಾಣ ಪತ್ರದ ಶುಲ್ಕ ರೂ.4950/-ಗಳನ್ನು ಪ್ರತಿ ವಿದ್ಯಾರ್ಥಿಗಳಿಂದ ಪಡೆದು ನಂತರ ನಿಯಾಮಾನುಸಾರ ಇತರೆ ಶುಲ್ಕಗಳನ್ನು ಪಡೆದು ಪ್ರವೇಶಾತಿ ನೀಡುವಂತೆ ತಿಳಿಸಲಾಗಿದೆ. ಈ ರೀತಿ ಪಡೆದ ಅರ್ಹತಾ ಪ್ರಮಾಣ ಪತ್ರದ ಶುಲ್ಕವನ್ನು ಕ್ರೋಢೀಕರಿಸಿ ವಿಶ್ವವಿದ್ಯಾನಿಲಯದ GRA ಖಾತೆಗೆ ಜಮಾ ಮಾಡಿ ಮೂಲ ರಶೀದಿ/ಚಲನ್ ಮತ್ತು ಅಂತಹ ವಿದ್ಯಾರ್ಥಿಗಳ ಯಾದಿಯನ್ನು** ಪ್ರವೇಶಾತಿ ಕೊನೆಯ ದಿನಾಂಕದ ನಂತರ ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸುವಂತೆ ತಿಳಿಸಲಾಗಿದೆ.

ಕುಲಸಚಿವರಿಂದ ಕರಡು ಅನುಮೋದಿಸಿದೆ.

ಉಪ ಕುಲಸಚಿವರು (ಶೈಕ್ಷಣಿಕ)
ಮೈಸೂರು ವಿಶ್ವವಿದ್ಯಾನಿಲಯ
ಮೈಸೂರು-570 005

ಇವರಿಗೆ:

1. ಮೈಸೂರು ವಿಶ್ವವಿದ್ಯಾನಿಲಯದ ವ್ಯಾಪ್ತಿಗೆ ಒಳಪಡುವ ಎಲ್ಲಾ ಬಿ.ಎ./ಬಿ.ಎಸ್ಸಿ./ಬಿ.ಸಿ.ಎ./ಬಿ.ಕಾಂ./ ಬಿ.ಬಿ.ಎ/ಬಿ.ಬಿ.ಎ(ಟೂರಿಸಂ ಆಂಡ್ ಟ್ರಾವೆಲ್)/ಬಿ.ಎ(ಫೈನ್‌ಆರ್ಟ್ಸ್)/ಬಿ.ಬಿ.ಎ.(ಟೂರಿಸಂ& ಹಾಸ್ಪಿಟಾಲಟಿ)/ಬಿ.ಎಸ್.ಡಬ್ಲ್ಯೂ./ಬಿ.ವಿಶ್ಯುಲ್ ಆರ್ಟ್ಸ್.(ನಾಲ್ಕು ವರ್ಷ)/ಬಿ.ಎ. ಎಸ್ ಎಲ್ ಪಿ, ಘಟಕ/ಸ್ವಾಯತ್ತ ಹಾಗೂ ಸಂಯೋಜಿತ ಪದವಿ ಕಾಲೇಜುಗಳ **ಪ್ರಾಂಶುಪಾಲರುಗಳಿಗೆ ಸೂಕ್ತ ಕ್ರಮಕ್ಕಾಗಿ.**
2. ಕುಲಸಚಿವರು(ಪರೀಕ್ಷಾಂಗ), ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.- **ಮಾಹಿತಿಗಾಗಿ**
3. ಹಣಕಾಸು ಅಧಿಕಾರಿಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
4. ನಿರ್ದೇಶಕರು, ಕಾಲೇಜು ಅಭಿವೃದ್ಧಿ ಮಂಡಳಿ, ಮೌಲ್ಯ ಭವನ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
5. ನಿರ್ದೇಶಕರು, ವಿದ್ಯಾರ್ಥಿ ಕ್ಷೇಮಪಾಲನ ವಿಭಾಗ, ಮಾನಸಗಂಗೋತ್ರಿ, ಮೈಸೂರು.
6. ನಿರ್ದೇಶಕರು, ಪಿ.ಎಂ.ಇ.ಬೋರ್ಡ್, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.

ಪು.ತಿ.ನೋ

7. ಸಂಯೋಜಕರು. ಐಸಿಡಿ, ಗಣಕ ವಿಜ್ಞಾನ ಅಧ್ಯಯನ ವಿಭಾಗ, ಮಾ.ಗಂ. ಮೈಸೂರು.- ವಿಶ್ವವಿದ್ಯಾನಿಲಯದ ವೆಬ್‌ಸೈಟ್‌ನಲ್ಲಿ ಪ್ರಕಟಿಸಬೇಕಾಗಿ ಕೋರಿದೆ.
8. ಪರೀಕ್ಷಾ/ಶೈಕ್ಷಣಿಕ ವಿಭಾಗದ ಎಲ್ಲಾ ಉಪಕುಲಸಚಿವ/ಸಹಾಯಕ ಕುಲಸಚಿವ/ಅಧೀಕ್ಷಕರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
9. ಮಾನ್ಯ ಕುಲಪತಿಗಳ ಆಪ್ತ ಕಾರ್ಯದರ್ಶಿಗಳು ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
10. ಆಡಳಿತ ಶಾಖೆ, ಶೈಕ್ಷಣಿಕ ವಿಭಾಗದ ಎಲ್ಲಾ ಕಾರ್ಯನಿರ್ವಾಹಕರುಗಳಿಗೆ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
11. ಮಾನ್ಯ ಕುಲಪತಿ/ಕುಲಸಚಿವ/ಕುಲಸಚಿವ(ಪರೀಕ್ಷಾಂಗ)/ಹಣಕಾಸು ಅಧಿಕಾರಿಗಳು ಇವರ ಆಪ್ತ ಸಹಾಯಕರುಗಳು; ಮೈ.ವಿ.ವಿ, ಮೈಸೂರು.
12. ಕಛೇರಿ ಪ್ರತಿ.